ಗಂಗಾ ಕಲ್ಯಾಣ ಯೋಜನೆಯ ಫಲಾನುಭವಿಗಳು

934 (1381) ಶ್ರೀ ಶ್ರೀನಿವಾಸ್ (ವಾಸು) ಎಸ್.ಆರ್. (ಗುಬ್ಬಿ) : ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಗುಬ್ಬಿ ತಾಲ್ಲೂಕಿನಲ್ಲಿ ಡಾ. ಅಂಬೇಡ್ಕರ್ ಅಭಿವೃದ್ಧಿ ನಿಗಮದ ವತಿಯಿಂದ ಗಂಗಾ ಕಲ್ಯಾಣ ಯೋಜನೆಯ ಫಲಾನುಭವಿಗಳನ್ನು ಗುರುತಿಸಲಾಗಿದೆಯೇ;

ಆ) ಹಾಗಿದ್ದಲ್ಲಿ, ಫಲಾನುಭವಿಗಳಿಗೆ ಇದುವರೆಗೂ ಕೊಳವೆ ಬಾವಿಗಳನ್ನು ಕೊರೆಯದೇ ಇರಲು ಕಾರಣಗಳೇನು?

ಇ) ಫಲಾನುಭವಿಗಳಿಗೆ ಕೊಳವೆಬಾವಿ ಕೊರೆಯದೇ ಇರುವುದರಿಂದ ಅವರ ಬೆಳೆಗಳಿಗೆ ತೊಂದರೆಯಾಗುತ್ತಿರುವುದು ನಿಜವಲ್ಲವೇ;

ಈ) ಹಾಗಿದ್ದಲ್ಲಿ, ಕೂಡಲೇ ಕೊಳವೆ ಬಾವಿಗಳನ್ನು ಕೊರೆಸಿ ಫಲಾನುಭವಿಗಳಿಗೆ ಅನುಕೂಲ ಕಲ್ಪಿಸಿಕೊಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?

ಶ್ರೀ ಡಿ. ಸುಧಾಕರ್ (ಸಮಾಜ ಕಲ್ಯಾಣ ಸಚಿವರು) :

ಅ) ಹೌದು.

ಆ) ಟರ್ನ್‌ಕೀ ಆಧಾರದಲ್ಲಿ ಟೆಂಡರ್ ಕರೆದಿದ್ದು, ಟೆಂಡರ್‌ದಾರರಿಂದ ಸ್ಪರ್ಧಾತ್ಮಕ ಟೆಂಡರ್‌ಗಳು ಸ್ವೀಕೃತವಾಗದ ಪ್ರಯುಕ್ತ ಈ ಪದ್ಧತಿಯನ್ನು ರದ್ದುಗೊಳಿಸಿ ಹಿಂದೆ ಇದ್ದಂತಹ ನಿಯಮಗಳಂತೆ ಟೆಂಡರ್ ಕರೆಯಲಾಗಿದೆ. ಟೆಂಡರ್ ಪ್ರಕ್ರಿಯೆ ಅಂತಿಮಗೊಳ್ಳದಿರುವುದರಿಂದ ಕೊಳವೆ ಬಾವಿ ಕೊರೆಯಲಾಗಿರುವುದಿಲ್ಲ.

ಇ) ಹೌದು.

ಈ) ತುರ್ತಾಗಿ ಕೊಳವೆ ಬಾವಿಗಳನ್ನು ಕೊರೆಸುವ ಉದ್ದೇಶದಿಂದ ಹಿಂದಿನ ದರಗಳಲ್ಲೆ ಹಿಂದೆ ಇದ್ದ ಗುತ್ತಿಗೆದಾರರಿಗೆ ಶೇ. 25 ಭಾಗದ ಗುರಿಯ ಕೊಳವೆ ಬಾವಿಗಳನ್ನು ಕೊರೆಯಲು ಆದೇಶ ನೀಡಲಾಗಿದೆ.

ಹಿಂದೆ ಇದ್ದ ಪದ್ಧತಿಯಲ್ಲೇ ಟೆಂಡರ್ ಕರೆದಿದ್ದು, ಸದ್ಯದಲ್ಲೇ ಟೆಂಡರ್ ಅಂತಿಮಗೊಳಿಸಿ ಉಳಿದ ಕೊಳವೆಬಾವಿಗಳನ್ನು ಕೊರೆಸಲಾಗುವುದು.